# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2013-14ನೇ ಸಾಲಿನಲ್ಲಿ ಮಹಾತ್ಮಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ ಆವರ್ತಕ ವೆಚ್ಚಗಳಿಗಾಗಿ ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು

ಓದಲಾಗಿದೆ ಕಾರ್ಯನಿರ್ವಾಹಕ ನಿರ್ದೇಶಕರು, MGIRED ರವರ ಪತ್ರ ಸಂಖ್ಯೆ ಎಂಜಿಐ /ಬಜೆಟ್/22/2012-13 ದಿನಾಂಕ 08.05.2013

**ಪ್ರಸ್ತಾವನೆ**

2013-14ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಗೆ(MGIRED) ₹ 150.00ಲಕ್ಷಗಳನ್ನು ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಒದಗಿಸಲಾಗಿದೆ.

ಓದಲಾದ ಪತ್ರದಲ್ಲಿ ಕಾರ್ಯನಿರ್ವಾಹಕ ನಿರ್ದೇಶಕರು, ಎಂಜಿಐಆರ್ಇಡಿ ರವರು ಕೋರಿರುವಂತೆ 2013-14ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಸಂಸ್ಥೆಗೆ ₹ 150.00ಲಕ್ಷಗಳನ್ನು ನಿಗದಿಪಡಿಸಲಾಗಿದೆ. ನಿಗದಿಪಡಿಸಲಾದ ಅನುದಾನದಲ್ಲಿ ₹ 37.50ಲಕ್ಷಗಳನ್ನು ಮೊದಲನೇ ಕಂತಾಗಿ ಹಾಗೂ ಮೊದಲನೇ ತ್ರೈಮಾಸಿಕದಲ್ಲಿ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಲೆಕ್ಕ ಶೀರ್ಷಿಕೆ 2501-04-105-0-02-059(ಯೋಜನೆ)ಯಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 22 ಜೈಅಯೋ 2013, ಬೆಂಗಳೂರು, ದಿನಾಂಕ 06.06.2013.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ 2013-14ನೇ ಸಾಲಿನಲ್ಲಿ, ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು ರವರಿಗೆ ಸಂಸ್ಥೆಯ ಆವರ್ತಕ ವೆಚ್ಚಗಳಿಗಾಗಿ ಮೊದಲನೇ ತ್ರೈಮಾಸಿಕ ಕಂತನ್ನಾಗಿ ₹ 37.50 ಲಕ್ಷಗಳನ್ನು **(ರೂ.ಮೂವತ್ತೇಳು ಲಕ್ಷದ ಐವತ್ತು ಸಾವಿರಗಳು ಮಾತ್ರ)** ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು ಲೆಕ್ಕ ಶೀರ್ಷಿಕೆ **2501-04-105-0-02-059(ಯೋಜನೆ)**ರಡಿ ಭರಿಸತಕ್ಕದ್ದು.

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆರವರು ಗ್ರಾಂಟ್ - ಇನ್ - ಏಡ್ ಬಿಲ್ಲುನ್ನು ಸಲ್ಲಿಸಿ ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತ್ತಿ ಸಂಖ್ಯೆ: ಗ್ರಾಅಪ 207 ಪಿಬಿಎಸ್ 2013 ದಿನಾಂಕ 26.05.2013 ರಲ್ಲಿ ಸಹಮತಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ:ಜೆ.ರವಿಶಂಕರ್)
ನಿರ್ದೇಶಕರು(ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ :

1. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಪ್ರಾಂತೀಯ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು ಬೆಂಗಳೂರು.
2. ನಿರ್ದೇಶಕರು,-ರಾಜ್ಯ ಹುಜೂರು ಖಜಾನೆ,
3. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ,ಗ್ರಾ.ಅ. ಮತ್ತು ಪಂಚಾಯತ್ ರಾಜ್ ಇಲಾಖೆ,
5. ನೆಟ್‌ವರ್ಕ ಮ್ಯಾನೇಜ್‌ಮೆಂಟ್ ಸೆಂಟರ್ ನಂ:49 ಸೆಕೆಂಡ್ ಬ್ಲಾಕ್, ಸೆಕೆಂಡ್ ಪ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ ರಸ್ತೆ,ಬೆಂಗಳೂರು.
6. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿಗಳು